Akashvani : Bangalore

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

23.08.2024 19.35 hrs

<u>ಮುಖ್ಯಾಂಶಗಳು</u>

<><*<><>*><>

- ಪ್ರಧಾನಿ ನರೇಂದ್ರ ಮೋದಿ-ಉಕ್ರೇನ್ ಅಧ್ಯಕ್ಷರ ನಡುವೆ ನಿಯೋಗ ಮಟ್ಟದ ಮಾತುಕತೆ; ನಾಲ್ಕು ಪ್ರಮುಖ ಒಡಂಬಡಿಕೆಗಳಿಗೆ ಸಹಿ
- ಭಾರತ-ಅಮೆರಿಕ ಸಹಜ ಮಿತ್ರ ರಾಷ್ಟ್ರಗಳಾಗಿದ್ದು, ವಿಶ್ವದಲ್ಲಿ ಶಾಂತಿ, ಸ್ಥಿರತೆ ಕಾಯ್ದುಕೊಳ್ಳಲು ಜಂಟಿ ಪ್ರಯತ್ನ- ರಕ್ಷಣಾ ಸಚಿವ ರಾಜನಾಥ್ ಸಿಂಗ್
- ಬಾಹ್ಯಾಕಾಶ ಕ್ಷೇತ್ರವಲ್ಲದೆ ದೇಶದ ಸಾಮಾಜಿಕ, ಆರ್ಥಿಕ ಅಭಿವೃದ್ಧಿಗೂ ಇಸ್ರೋ ಮಹತ್ವದ ಕೊಡುಗೆ- ರಾಷ್ಟ್ರಪತಿ ದ್ರೌಪದಿ ಮುರ್ಮು ಶ್ಲಾಘನೆ
- ೨೦೨೧ ರ ಶಾಲಾ ಸುರಕ್ಷತೆ ಮತ್ತು ಭದ್ರತೆ ಮಾರ್ಗಸೂಚಿ ಕಡ್ಡಾಯ ಜಾರಿಗೆ ರಾಜ್ಯಗಳಿಗೆ ಕೇಂದ್ರ ಸರ್ಕಾರದ ಸೂಚನೆ

<><*<><>*><>

ಉಕ್ರೇನ್ ಕೀವ್‌ನಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಹಾಗೂ ಉಕ್ರೇನ್ ಅಧ್ಯಕ್ಷ ವ್ಲೊಲೊಡಿಮಿರ್ ಝೆಲೆನ್ಸ್ಕಿ ಅವರ ನಡುವೆ ನಿಯೋಗಮಟ್ಟದ ಮಾತುಕತೆ ನಡೆಯಿತು. ಈ ಸಂದರ್ಭದಲ್ಲಿ ಉಭಯ ನಾಯಕರು, ನಾಲ್ಕು ಒಡಂಬಡಿಕೆಗಳಿಗೆ ಸಹಿ ಹಾಕಿ ವಿನಿಮಯ ಮಾಡಿಕೊಂಡರು. ಉಕ್ರೇನ್‌ನಲ್ಲಿ ಸಮುದಾಯ ಅಭಿವೃದ್ಧಿ, ಔಷಧಿಗಳ ಗುಣಮಟ್ಟ ನಿಯಂತ್ರಣ ಸಾಂಸ್ಕೃತಿಕ ವಿನಿಮಯ ಮತ್ತು ಕೃಷಿ ಸೇರಿದಂತೆ ವಿವಿಧ ವಲಯಗಳಲ್ಲಿ ದ್ವಿಪಕ್ಷೀಯ ಸಂಬಂಧ ವೃದ್ಧಿ ಕುರಿತ ಒಡಂಬಡಿಕೆಗಳಿಗೆ ಸಹಿ ಮಾಡಲಾಗಿದೆ. ಉಕ್ರೇನ್‌ಗೆ ಪ್ರಧಾನಿ ಭೇಟಿ ಕುರಿತು ಸುದ್ದಿಗಾರರಿಗೆ ಮಾಹಿತಿ ನೀಡಿದ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್, ಉಭಯ ನಾಯಕರು ದ್ವಿಪಕ್ಷೀಯ ಸಂಬಂಧಗಳು, ವ್ಯಾಪಾರ, ಆರ್ಥಿಕ ವಿಚಾರಗಳು, ರಕ್ಷಣೆ, ಔಷಧಿ ಮತ್ತು ಕೃಷಿಗೆ ಸಂಬಂಧಿಸಿದಂತೆ ಚರ್ಚೆ ನಡೆಸಿದ್ದಾರೆ ಎಂದು ಹೇಳಿದರು. ಉಕ್ರೇನ್‌ನಲ್ಲಿ ನಡೆಯುತ್ತಿರುವ ಸಂಘರ್ಷ ಕುರಿತಂತೆಯೂ ಉಭಯ ನಾಯಕರು ಚರ್ಚೆ ನಡೆಸಿದ್ದಾರೆ. ಬಿಕ್ಕಟ್ಟಿಗೆ ಪರಿಹಾರ ಕಂಡುಕೊಳ್ಳಲು ಎರಡೂ ಕಡೆಯಿಂದ ಪರಸ್ಪರ ಮಾತುಕತೆ ನಡೆಸಬೇಕು ಎಂಬುದು ಭಾರತದ ಅಭಿಪ್ರಾಯವಾಗಿದೆ ಎಂದು ಜೈಶಂಕರ್ ತಿಳಿಸಿದರು. ಉಕ್ರೇನ್‌ನಲ್ಲಿ ಆದಷ್ಟು ಬೇಗ ಶಾಂತಿ ನೆಲೆಸುವಂತೆ ಮಾಡಲು ಸಂಬಂಧಪಟ್ಟ ಭಾಗಿದಾರರು ಪ್ರಾಮಾಣಿಕ ಪ್ರಯತ್ನ ಮಾಡಬೇಕು. ಶಾಂತಿ ಮರುಕಳಿಸಲು ಭಾರತ ಸಾಧ್ಯವಾದ ಎಲ್ಲ ರೀತಿಯಲ್ಲೂ ತನ್ನ ಕೊಡುಗೆಯನ್ನು ನೀಡಲು ಉತ್ಸುಕವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಪುನರುಚ್ಚರಿಸಿದ್ದಾರೆ ಎಂದು ವಿದೇಶಾಂಗ ಸಚಿವರು ಹೇಳಿದರು. ಇದಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ, ಪೋಲೆಂಡ್‌ನಿಂದ ವಿಶೇಷ ರೈಲಿನ ಮೂಲಕ ಕೀವ್ ತಲುಪಿದರು. ಕೀವ್‌ಗೆ ಬಂದಿಳಿದ ಪ್ರಧಾನಿಯವರಿಗೆ ಅನಿವಾಸಿ ಭಾರತೀಯರಿಂದ ಅದ್ದೂರಿ ಸ್ವಾಗತ ದೊರೆಯಿತು. ಇದೇ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಕೀವ್‌ನಲ್ಲಿರುವ ಮಹಾತ್ಮಗಾಂಧಿ ಪ್ರತಿಮೆಗೆ ಗೌರವ ನಮನ ಸಲ್ಲಿಸಿದರು. ೧೯೯೨ರಲ್ಲಿ ಭಾರತ - ಉಕ್ರೇನ್ ನಡುವೆ ರಾಜತಾಂತ್ರಿಕ ಸಂಬಂಧಗಳು ಆರಂಭವಾದ ನಂತರ ಇದೇ ಮೊದಲ ಬಾರಿಗೆ ಭಾರತದ ಪ್ರಧಾನಿಯೊಬ್ಬರು ಉಕ್ರೇನ್‌ಗೆ ಭೇಟಿ ನೀಡಿದ್ದಾರೆ.

<><*<><>*><>

ಭಾರತ ಮತ್ತು ಅಮೆರಿಕ ಸಹಜ ಮಿತ್ರ ರಾಷ್ಟ್ರಗಳಾಗಿದ್ದು, ವಿಶ್ವದಲ್ಲಿ ಶಾಂತಿ, ಸಮೃದ್ಧಿ ಮತ್ತು ಸ್ಥಿರತೆ ಕಾಯ್ದುಕೊಳ್ಳಲು ಜಂಟಿ ಪ್ರಯತ್ನ ನಡೆಸಲಿವೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ವಾಷಿಂಗ್‌ಟನ್ ಡಿಸಿಯಲ್ಲಿ ಭಾರತೀಯ ಸಮುದಾಯವನ್ನುದ್ದೇಶಿಸಿ ಮಾತನಾಡಿದ ಅವರು, ಭಾರತ ಮತ್ತು ಅಮರಿಕ ವಿಶಿಷ್ಟವಾಗಿ ರೂಪುಗೊಂಡ ಬಲಿಷ್ಠ ಪಾಲುದಾರ ರಾಷ್ಟ್ರಗಳಾಗಿದ್ದು, ಈ ಸಹಯೋಗದಲ್ಲಿ ಪ್ರಗತಿ ಹೊಂದುತ್ತಿವೆ ಎಂದು ಒತ್ತಿ ಹೇಳಿದರು. ಭಾರತದ ಆರ್ಥಿಕತೆ ಪ್ರಗತಿಗೆ ಕಾರಣವಾಗುವ ನಿರೀಕ್ಷೆಗಳ ಕುರಿತು ಪ್ರಸ್ತಾಪಿಸಿದ ಅವರು, ೨೦೨೭ ರ ವೇಳೆಗೆ ದೇಶ ಮೂರನೇ ಬಹುದೊಡ್ಡ ಆರ್ಥಿಕ ರಾಷ್ಟ್ರವಾಗಿ ಹೊರಹೊಮ್ಮಲಿದೆ ಎಂದರು. ರಕ್ಷಣಾ ರಫ್ತುಗಳ ಪ್ರಸ್ತಾಪಿಸಿದ ಸಚಿವರು, ಇದೀಗ ಭಾರತ ೨೧ ಸಾವಿರ ಕೋಟಿ ರೂಪಾಯಿ ಮೌಲ್ಯದ ರಕ್ಷಣಾ ಉತ್ಪನ್ನಗಳನ್ನು ವಿದೇಶಗಳಿಗೆ ರಫ್ತು ಮಾಡುತ್ತಿದೆ ಎಂದು ತಿಳಿಸಿದರು.

<><*<><>*><>

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ-ಇಸ್ರೋ, ಬಾಹ್ಯಾಕಾಶ ವಲಯಕ್ಕೆ ಮಾತ್ರವಲ್ಲದೆ, ದೇಶದ ಸಾಮಾಜಿಕ-ಆರ್ಥಿಕ ಅಭಿವೃದ್ಧಿಗೂ ಮಹತ್ವದ ಕೊಡುಗೆಗಳನ್ನು ನೀಡಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ನವದೆಹಲಿಯಲ್ಲಿಂದು ಏರ್ಪಡಿಸಿದ್ದ ಚೊಚ್ಚಲ ರಾಷ್ಟ್ರೀಯ ಬಾಹ್ಯಾಕಾಶ ದಿನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬಾಹ್ಯಾಕಾಶ ವಲಯದಲ್ಲಿನ ಪ್ರಗತಿಯಿಂದಾಗಿ ಆರೋಗ್ಯ, ಸಾರಿಗೆ, ಪರಿಸರ, ಇಂಧನ, ಭದ್ರತೆ, ಮಾಹಿತಿ ತಂತ್ರಜ್ಞಾನ ಹಾಗೂ ಇತರ ವಲಯಗಳಿಗೂ ಪ್ರಯೋಜನವಾಗಿದೆ ಎಂದು ತಿಳಿಸಿದರು. ಬಾಹ್ಯಾಕಾಶದ ಪರಿಶೋಧನೆಯಿಂದ ಮಾನವನ ಶಕ್ತಿ-ಸಾಮರ್ಥ್ಯಗಳ ವೃದ್ಧಿಗೆ ಅನುಕೂಲವಾಗಿದೆ. ಚಂದ್ರನ ಅಂಗಳದಲ್ಲಿ ಇಸ್ರೋದ ಚಂದ್ರಯಾನ ಇಳಿದಿದ್ದು, ಎಲ್ಲ ಭಾರತೀಯರಿಗೆ ಹೆಮ್ಮೆಯ ವಿಷಯವಾಗಿದೆ. ಈ ಹಿನ್ನೆಲೆಯಲ್ಲಿ ರಾಷ್ಟ್ರೀಯ ಬಾಹ್ಯಾಕಾಶ ದಿನವನ್ನು ಆಚರಿಸುತ್ತಿರುವುದು ಶ್ಲಾಘನೀಯ ಕ್ರಮವಾಗಿದೆ ಎಂದು ಹೇಳಿದರು. ಭಾರತದ ಬಾಹ್ಯಾಕಾಶ ವಲಯದ ಬೆಳವಣಿಗೆ ವಿಶಿಷ್ಟವಾಗಿದ್ದು, ಲಭ್ಯವಿರುವ ಕನಿಷ್ಠ ಸಂಪನ್ಮೂಲಗಳನ್ನು ಬಳಸಿಕೊಂಡು ಮಂಗಳಯಾನ ಮಿಷನ್ ಅನ್ನು ಯಶಸ್ವಿಗೊಳಿಸಿರುವುದು ಅಥವಾ ಏಕಕಾಲಕ್ಕೆ ನೂರಕ್ಕೂ ಹೆಚ್ಚು ಉಪಗ್ರಹಗಳ ಉಡಾವಣೆ ಮಾಡಿರುವಂತಹ ಹಲವಾರು ಸಾಧನೆಗಳನ್ನು ಮಾಡಲಾಗಿದೆ. ೨೦೩೦ರ ವೇಳೆಗೆ ಅವಶೇಷಗಳ ಮುಕ್ತ ಬಾಹ್ಯಾಕಾಶ ಮಿಷನ್‌ಗಳನ್ನು ಉಡಾಯಿಸಲು ಇಸ್ರೋ ಮುಂದಾಗಿರುವುದು ಹೆಮ್ಮೆಯ ವಿಷಯವಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ತಿಳಿಸಿದರು. ಬಾಹ್ಯಾಕಾಶ ಖಾತೆ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್ ಮಾತನಾಡಿ, ಬಾಹ್ಯಾಕಾಶ ವಲಯಕ್ಕೆ ಈ ಹಿಂದೆ ಎದುರಾಗಿದ್ದ ಎಲ್ಲ ಸಂಕೋಲೆಗಳನ್ನು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಮುಕ್ತಗೊಳಿಸಿದೆ ಎಂದು ಹೇಳಿದರು. ಇಸ್ರೋ ಅಧ್ಯಕ್ಷ ಎಸ್.ಸೋಮನಾಥ್ ಮಾತನಾಡಿ, ದೇಶಾದ್ಯಂತ ರಾಷ್ಟ್ರೀಯ ಬಾಹ್ಯಾಕಾಶ ದಿನವನ್ನು ಆಚರಿಸಲಾಗುತ್ತಿದೆ. ವಿವಿಧ ಇಲಾಖೆಗಳು, ಸಚಿವಾಲಯಗಳು, ಶಿಕ್ಷಣ ಸಂಸ್ಥೆಗಳು, ವೈಜ್ಞಾನಿಕ ಸಂಘ-ಸಂಸ್ಥೆಗಳು, ಸ್ವಯಂ ಸೇವಾಸಂಸ್ಥೆಗಳು ಹಾಗೂ ಸಾರ್ವಜನಿಕರ ಸಹಭಾಗಿತ್ವದೊಂದಿಗೆ ಈ ಕಾರ್ಯಕ್ರಮ ನಡೆಯುತ್ತಿದೆ ಎಂದರು. ಇದೇ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಇಸ್ರೋ ರೋಬೋಟಿಕ್ಸ್ ಚಾಲೆಂಜ್ ಮತ್ತು ಭಾರತೀಯ ಅಂತರಿಕ್ಷ್ ಹ್ಯಾಕಥಾನ್‌ನಲ್ಲಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಿದರು.

<><*<><>*><>

ಮೊದಲ ರಾಷ್ಟ್ರೀಯ ಬಾಹ್ಯಾಕಾಶ ದಿನಾಚರಣೆ ಸಂದರ್ಭದಲ್ಲಿ ಉಪ ರಾಷ್ಟ್ರಪತಿ ಜಗದೀಪ್ ಧನ್‌ಕರ್ ಹಾಗೂ ಪ್ರಧಾನಿ ನರೇಂದ್ರ ಮೋದಿ, ದೇಶ ಬಾಂಧವರಿಗೆ ಶುಭಾಶಯ ಕೋರಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಉಪ ರಾಷ್ಟ್ರಪತಿ, ಆತ್ಮನಿರ್ಭರ ಭಾರತ

ನಿರ್ಮಾಣದ ಸ್ಫೂರ್ತಿಯೊಂದಿಗೆ ಬಾಹ್ಯಾಕಾಶ ವಲಯದಲ್ಲಿ ಮಾಡಿರುವ ಅದ್ಭುತ ಸಾಧನೆಯ ಸ್ಮರಣಾರ್ಥ ಈ ದಿನವನ್ನು ಆಚರಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ. ಬದ್ಧತೆಯುಳ್ಳ ವಿಜ್ಞಾನಿಗಳಿಂದ ಸದೃಢ ರಾಷ್ಟ್ರದ ನಿರ್ಮಾಣಕ್ಕೆ ಏನೆಲ್ಲ ಸಾಧಿಸಬಹುದು ಎಂಬುದರ ದ್ಯೋತಕವಾಗಿ ದೇಶದ ಸಾಧನೆಗಳನ್ನು ಬಿಂಬಿಸಲಾಗುತ್ತಿದೆ ಎಂದು ಹೇಳಿರುವ ಅವರು, ಬಾಹ್ಯಾಕಾಶ ವಿಜ್ಞಾನಿಗಳಿಗೆ ತಮ್ಮ ಶುಭಾಶಯಗಳನ್ನು ಕೋರಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ ನರೇಂದ್ರ ಮೋದಿ, ಬಾಹ್ಯಾಕಾಶ ವಲಯದಲ್ಲಿ ದೇಶದ ಸಾಧನೆಗಳನ್ನು ಅತ್ಯಂತ ಹೆಮ್ಮೆಯಿಂದ ಸ್ಮರಿಸುವ ದಿನವಾಗಿದೆ. ಭಾರತೀಯ ಬಾಹ್ಯಾಕಾಶ ವಿಜ್ಞಾನಿಗಳ ಕೊಡುಗೆಗಳನ್ನು ಮೆಚ್ಚುವಂತ ದಿನವಾಗಿದೆ. ಮುಂಬರುವ ದಿನಗಳಲ್ಲಿ ಬಾಹ್ಯಾಕಾಶ ಕ್ಷೇತ್ರದಲ್ಲಿ ಕೈಗೊಳ್ಳಬಹುದಾದ ಕಾರ್ಯಕ್ರಮಗಳಿಗೆ ಹೆಚ್ಚಿನ ನೆರವು ನೀಡಲು ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ಶಾಲಾ ಸುರಕ್ಷತೆ ಮತ್ತು ಭದ್ರತೆ-೨೦೨೧ ರ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಜಾರಿಗೊಳಿಸುವಂತೆ ಕೇಂದ್ರ ಶಿಕ್ಷಣ ಸಚಿವಾಲಯ, ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ನಿರ್ದೇಶನ ನೀಡಿದೆ. ಪೋಕ್ಸೋ ಮಾರ್ಗಸೂಚಿಗಳಿಗೆ ಅನುಗುಣವಾಗಿ ಶಾಲಾ ಶಿಕ್ಷಣ ಮತ್ತು ಸಾಕ್ಷರತೆಯ ಸಚಿವಾಲಯ, ಮಾರ್ಗಸೂಚಿಗಳನ್ನು ಸಿದ್ಧಪಡಿಸಿದೆ. ಸರ್ಕಾರಿ, ಸರ್ಕಾರಿ-ಅನುದಾನಿತ ಮತ್ತು ಖಾಸಗಿ ಶಾಲೆಗಳಲ್ಲಿ ಓದುತ್ತಿರುವ ಮಕ್ಕಳ ಸುರಕ್ಷತೆ ಮತ್ತು ಭದ್ರತಾ ನಿರ್ವಹಣೆಯ ಹೊಣೆಗಾರಿಕೆಯನ್ನು ನಿಗದಿಪಡಿಸುವ ನಿಬಂಧನೆಗಳನ್ನು ಮಾರ್ಗಸೂಚಿಗಳಲ್ಲಿ ಅಳವಡಿಸಲಾಗಿದೆ. ಮಾರ್ಗಸೂಚಿಯಿಂದ ಶಿಕ್ಷಣದ ಹಕ್ಕುಗಳ ರಕ್ಷಣೆ, ಕಾನೂನು ಬೆಂಬಲ, ಸಮಾಲೋಚನೆ ಮತ್ತು ಶಾಲಾ ಆವರಣದಲ್ಲಿ ಸುರಕ್ಷಿತ ವಾತಾವರಣ ಕಲ್ಪಿಸಲು ಸಹಕಾರಿಯಾಗಲಿದೆ.

<><*<><>*><>

ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಮೂರು ಹೊಸ ಕ್ರಿಮಿನಲ್ ಕಾನೂನುಗಳಿಂದಾಗಿ ವಸಾಹತು ಶಾಹಿ ವ್ಯವಸ್ಥೆಯನ್ನು ತೆಗೆದು ಹಾಕಲಾಗಿದೆ ಎಂದು ಉಪ ರಾಷ್ಟ್ರಪತಿ ಜಗದೀಪ್ ಧನ್‌ಕರ್ ಹೇಳಿದ್ದಾರೆ. ಗುಜರಾತ್ ಗಾಂಧಿನಗರದಲ್ಲಿಂದು ಏರ್ಪಡಿಸಿದ್ದ ರಾಷ್ಟ್ರೀಯ ವಿಧಿವಿಜ್ಞಾನ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಮತ್ತು ಬೋಧನಾ ಸಿಬ್ಬಂದಿಯನ್ನು ಉದ್ದೇಶಿಸಿ ಭಾಷಣ ಮಾಡಿದ ಅವರು, ಕೇಂದ್ರ ಸರ್ಕಾರದ ಈ ಕ್ರಮದಿಂದಾಗಿ ದೇಶದಲ್ಲಿನ ಕ್ರಿಮಿನಲ್ ನ್ಯಾಯ ವ್ಯವಸ್ಥೆಗೆ ಹೆಚ್ಚಿನ ಶಕ್ತಿ ತುಂಬಲಾಗಿದೆ ಎಂದರು. ಸಮಕಾಲಿನ ಕಾನೂನು ವ್ಯವಸ್ಥೆಯಲ್ಲಿ ವಿಧಿವಿಜ್ಞಾನದ ಪಾತ್ರ ಪ್ರಾಮುಖ್ಯತೆ ಪಡೆದಿದೆ. ವಿಧಿವಿಜ್ಞಾನ ಕೇವಲ ತಾಂತ್ರಿಕ ಕ್ಷೇತ್ರಕ್ಕೆ ಸಂಬಂಧಪಟ್ಟ ವಿಷಯವಾಗಿರದೆ, ದೇಶದ ಕ್ರಿಮಿನಲ್ ನ್ಯಾಯ ವ್ಯವಸ್ಥೆಗೆ ಒಂದು ಮೈಲುಗಲ್ಲಾಗಿದೆ ಎಂದು ಅವರು ಅಭಿಪ್ರಾಯಪಟಿದ್ದಾರೆ. ಇದಕ್ಕೂ ಮುನ್ನ ಉಪರಾಷ್ಟ್ರಪತಿ, ವಿಶ್ವವಿದ್ಯಾಲಯದ ಆವರಣದಲ್ಲಿ ಸಸಿ ನೆಟ್ಟು ನೀರೆರೆದರು.

<><*<><>*><>

ಪ್ರವಾಹ ಪೀಡಿತ ತ್ರಿಪುರಾದಲ್ಲಿ ಪರಿಹಾರ ಕಾರ್ಯಗಳಿಗಾಗಿ ೪೦ ಕೋಟಿ ರೂಪಾಯಿ ಆರ್ಥಿಕ ನೆರವು ನೀಡಲು ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ. ಪ್ರವಾಹ ಸಂತ್ರಸ್ಥರಿಗೆ ಪರಿಹಾರ ಮತ್ತು ಪುನರ್ ವಸತಿ ಕಲ್ಪಿಸುವ ಉದ್ದೇಶದಿಂದ ರಾಜ್ಯ ವಿಕೋಪ ಪರಿಹಾರ ನಿಧಿಗೆ ಕೇಂದ್ರ ಪಾಲಿನ ಹಣವನ್ನು ಬಿಡುಗಡೆ ಮಾಡಲು ತೀರ್ಮಾನಿಸಲಾಗಿದೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ, ಪ್ರವಾಹ ಪೀಡಿತ ತ್ರಿಪುರಾದಲ್ಲಿ ಪರಿಹಾರ ಮತ್ತು ರಕ್ಷಣಾ ಕಾರ್ಯಗಳಿಗಾಗಿ ೧೧ ರಾಷ್ಟ್ರೀಯ ವಿಕೋಪ ಪರಿಹಾರ ಪಡೆಯ ತಂಡಗಳು, ಸೇನೆಯ ಮೂರು

ತುಕಡಿಗಳು ಮತ್ತು ವಾಯುಪಡೆಯ ನಾಲ್ಕು ಹೆಲಿಕಾಪ್ಟರ್‌ಗಳನ್ನು ನಿಯೋಜಿಸಲಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ರೈತರ ಆದಾಯ ದ್ವಿಗುಣಗೊಳಿಸಲು ಹಾಗೂ ಬೆಳೆಗಳ ಉತ್ಪಾದಕತೆ ಹೆಚ್ಚು ಮಾಡಲು ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ಬಿಹಾರದ ಪಾಟ್ನಾದಲ್ಲಿಂದು ನಡೆದ ಕಿಸಾನ್ ಸಂವಾದ ಕಾರ್ಯಕ್ರಮದಲ್ಲಿ ರೈತರನ್ನುದ್ದೇಶಿಸಿ ಮಾತನಾಡಿದ ಅವರು, ರೈತರಿಗೆ ಸಂಬಂಧಿಸಿದಂತೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಕೈಗೊಂಡಿರುವ ಎಲ್ಲ ನಿರ್ಣಯಗಳನ್ನು ಜಾರಿಗೊಳಿಸಲಾಗುತ್ತಿದೆ. ಈ ಪೈಕಿ ಕಿಸಾನ್ ಕ್ರಿಡಿಟ್ ಕಾರ್ಡ್‌ಗಳ ಮೂಲಕ ಅಗ್ಗದ ಬಡ್ಡಿದರದಲ್ಲಿ ಸಾಲ ಸೌಲಭ್ಯ, ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ನೀಡುವ ಮೂಲಕ ಯೋಗ್ಯ ದರ ಸಿಗುವಂತೆ ಮಾಡಲಾಗುತ್ತಿದೆ ಎಂದು ತಿಳಿಸಿದರು. ಕೃಷಿ ಕ್ಷೇತ್ರದ ಮೇಲೆ ಹವಾಮಾನ ಬದಲಾವಣೆಯ ಪರಿಣಾಮವನ್ನು ತಡೆಯುವ ಸಾಮರ್ಥ್ಯವುಳ್ಳ ಬಿತ್ತನೆ ಬೀಜಗಳನ್ನು ಪೂರೈಸಲಾಗುತ್ತಿದೆ ಹಾಗೂ ಅಲ್ಪಕಾಲದಲ್ಲಿ ಹೆಚ್ಚಿನ ಇಳುವರಿ ನೀಡುವ ವಿವಿಧ ತಳಿಗಳನ್ನು ರೈತರಿಗೆ ಒದಗಿಸಲಾಗುತ್ತಿದೆ ಎಂದು ಹೇಳಿದರು.

<><*<><>*><>

ಅರ್ಹತೆಯಿಲ್ಲದ ಪೈಲಟ್‌ಗಳಿಂದ ವಿಮಾನಗಳ ಹಾರಾಟ ನಿರ್ವಹಿಸಿದ್ದಕ್ಕೆ ನಾಗರಿಕ ವಿಮಾನಯಾನ ನಿರ್ದೇಶನಾಲಯ ಆಉಆಂ, ಏರ್ ಇಂಡಿಯಾಗೆ ತೊಂಬತ್ತು ಲಕ್ಷ ರೂಪಾಯಿ ದಂಡ ವಿಧಿಸಿದೆ. ಏರ್ ಇಂಡಿಯಾ ನಿರ್ದೇಶಕರಿಗೆ ಆರು ಲಕ್ಷ ರೂಪಾಯಿ ಮತ್ತು ಏರ್ ಇಂಡಿಯಾದ ತರಬೇತಿ ನಿರ್ದೇಶಕರಿಗೆ ಮೂರು ಲಕ್ಷ ರೂಪಾಯಿ ಹೆಚ್ಚುವರಿ ದಂಡ ವಿದಿಸಲಾಗಿದೆ. ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಎಚ್ಚರಿಕೆ ವಹಿಸಬೇಕೆಂದು ಏರ್ ಇಂಡಿಯಾಗೆ ಎಚ್ಚರಿಕೆಯನ್ನೂ ನೀಡಲಾಗಿದೆ.

<><*<><>*><>

ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗಿದ್ದ ವಿವಿಧ ೧೫೬ ಔಷಧಿಗಳನ್ನು ಕೇಂದ್ರ ಸರ್ಕಾರ ನಿಷೇಧಿಸಿದೆ. ಎರಡು ಅಥವಾ ಅದಕ್ಕಿಂತ ಹೆಚ್ಚು ಔಷಧ ರಾಸಾಯನಿಕಗಳ ಸಂಯೋಜನೆಯ ಫಿಕ್ಸ್‌ಡ್ ಡೋಸ್ ಡ್ರಗ್ಸ್‌ಗಳು ಸೇವನೆಗೆ ಯೋಗ್ಯವಲ್ಲ ಎಂದು ಪರಿಗಣಿಸಲಾಗಿದೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ಹೊರಡಿಸಿರುವ ಅಧ್ಯಾದೇಶದಲ್ಲಿ ತಿಳಿಸಲಾಗಿದೆ. ಆಂಟಿಬಯೋಟಿಕ್‌ಗಳು, ನೋವು ನಿವಾರಕಗಳು ಮತ್ತು ಮಲ್ಟಿವಿಟಮಿನ್‌ಗಳು ಸೇರಿದಂತೆ ೧೫೬ ಔಷಧಿಗಳು ಆರೋಗ್ಯಕ್ಕೆ ಅಪಾಯವನ್ನುಂಟು ಮಾಡುತ್ತವೆ ಎಂದು ತಿಳಿಸಿದೆ. ಔಷಧಗಳ ತಾಂತ್ರಿಕ ಸಲಹಾ ಮಂಡಳಿ ಸಲಹೆ ಮೇರೆಗೆ ಔಷಧಗಳ ಉತ್ಪಾದನೆ, ಮಾರಾಟ, ವಿತರಣೆ ಮೇಲೆ ನಿಷೇಧ ಹೇರಲಾಗಿದೆ.

<><*<><>*><>

ನೇಪಾಳದ ಮರ್ಸ್ಯಂಗ್ಡಿ ನದಿಗೆ ಇಂದು ಮಧ್ಯಾಹ್ನ ಬಸ್‌ವೊಂದು ಉರುಳಿಬಿದ್ದ ಪರಿಣಾಮ ಕನಿಷ್ಠ ೧೪ ಮಂದಿ ಮೃತಪಟ್ಟಿರುವ ದಾರುಣ ಘಟನೆ ನಡೆದಿದೆ. ಘಟನೆಯಲ್ಲಿ ೧೬ ಪ್ರಯಾಣಿಕರನ್ನು ರಕ್ಷಿಸಲಾಗಿದ್ದು, ಚಿಕಿತ್ಸೆಗಾಗಿ ಆಸ್ಪತ್ರೆಗೆ ಸೇರಿಸಲಾಗಿದೆ. ಬಸ್ ಪೊಖಾರದಿಂದ ಕಠ್ಮಂಡುಗೆ ತೆರಳುತಿದ್ದಾಗ ಈ ದುರಂತ ಸಂಭವಿಸಿದೆ ಎಂದು ನಮ್ಮ ಪ್ರತಿನಿಧಿ ವರದಿ ಮಾಡಿದ್ದಾರೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>